**All India Radio: Bangalore**
**National Bulletin In Kannada**
**29.05.2025 1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**29.05.2025 1.10 p.m.**
**<><><><>**

ಮುಖ್ಯಾಂಶಗಳು

1. ದೇಶಾದ್ಯಂತ ವಿಕಸಿತ ಕೃಷಿ ಸಂಕಲ್ಪ ಅಭಿಯಾನಕ್ಕೆ ಚಾಲನೆ ನೀಡಿದ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್
2. ಸಿಕ್ಕಿಂ ನಲ್ಲಿ ಹಲವು ಅಭಿವೃದ್ಧಿ ಯೋಜನೆಗಳನ್ನು ಲೋಕಾರ್ಪಣೆಗೊಳಿಸಿದ ಪ್ರಧಾನಿ ನರೇಂದ್ರ ಮೋದಿ
3. ಮೇಕ್ ಇನ್ ಇಂಡಿಯಾ ಉಪಕ್ರಮವು ಭಾರತದ ಭದ್ರತೆ ಮತ್ತು ಸಮೃದ್ಧಿಗೆ ಪೂರಕ : ಸಚಿವ ರಾಜನಾಥ್ ಸಿಂಗ್
4. ಕೇಂದ್ರ ಗೃಹ ಸಚಿವ ಅಮಿತ್ ಶಾ, ಇಂದಿನಿಂದ ಎರಡು ದಿನಗಳ ಜಮ್ಮು ಪ್ರವಾಸ
5. ಐಪಿಎಲ್ ಟಿ-೨೦ ಕ್ರಿಕೆಟ್ : ಮೊದಲ ಕ್ವಾಲಿಫೈಯರ್‌ನಲ್ಲಿ ಪಂಜಾಬ್ ಕಿಂಗ್ಸ್ ಹಾಗೂ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮುಖಾಮುಖಿ

<><><><>

'ವಿಕಸಿತ ಕೃಷಿ ಸಂಕಲ್ಪ ಅಭಿಯಾನ' ಎಂದರೆ ವಿಜ್ಞಾನಿಗಳು ಪ್ರಯೋಗಾಲಯ ಬಿಟ್ಟು ರೈತರ ನಡುವೆ ಹೊಲಗಳಿಗೆ ತೆರಳಬೇಕು. ಹಳ್ಳಿಯಲ್ಲಿ ರೈತರೊಂದಿಗೆ ಕುಳಿತು ಚರ್ಚಿಸಬೇಕು ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ಒಡಿಶಾದ ಪುರಿಯಲ್ಲಿ 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ' ಚಾಲನೆ ನೀಡಿ ಮಾತನಾಡಿದ ಅವರು ಇಂದಿನಿಂದ ಎಲ್ಲಾ ವಿಜ್ಞಾನಿಗಳು ಪ್ರಯೋಗಾಲಯ ಬಿಟ್ಟು ಗ್ರಾಮಕ್ಕೆ ಬರುತ್ತಿದ್ದಾರೆ. ಅವರೊಂದಿಗೆ ಕೃಷಿಯಲ್ಲಿ ಹೊಸ ಪ್ರಯೋಗಗಳನ್ನು ಕಲಿಯುವ ಮೂಲಕ ಉತ್ಪಾದನೆಯನ್ನು ಹೆಚ್ಚಿಸುವಂತೆ ರೈತರಿಗೆ ಕರೆ ನೀಡಿದ್ದಾರೆ.

ಧ್ವನಿ : ಶಿವರಾಜ್ ಸಿಂಗ್ ಚೌಹಾಣ್ (೨೩ ಸೆಕೆಂಡ್‌ಗಳು)

ದೇಶದ ೭೦೦ ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಈ ಅಭಿಯಾನ ನಡೆಯಲಿದ್ದು, ಜೂನ್ ೧೨ರವರೆಗೆ ಮುಂದುವರಿಯಲಿದೆ.

ಅಭಿಯಾನದಲ್ಲಿ ಕರ್ನಾಟಕ ಸೇರಿದಂತೆ ತಮಿಳುನಾಡು, ತೆಲಂಗಾಣ, ಮೇಘಾಲಯ, ಮಧ್ಯಪ್ರದೇಶ, ದೆಹಲಿ ಮತ್ತು ಛತ್ತೀಸ್ ಗಢ ರಾಜ್ಯಗಳಲ್ಲಿ ಸಚಿವರು ಪ್ರವಾಸ ಕೈಗೊಳ್ಳಲಿದ್ದಾರೆ.

<><><>

ಪ್ರಧಾನಿ ನರೇಂದ್ರ ಮೋದಿ ಇಂದು ಸಿಕ್ಕಿಂನಲ್ಲಿ ಹಲವು ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿ, ಉದ್ಘಾಟನೆ ಮಾಡಿದ್ದಾರೆ. ಸಿಕ್ಕಿಂನ ನಾಮ್ಚಿ ಜಿಲ್ಲೆಯಲ್ಲಿ ೭೫೦ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ೫೦೦ ಹಾಸಿಗೆಗಳ ಹೊಸ ಜಿಲ್ಲಾ ಆಸ್ಪತ್ರೆ; ಗ್ಯಾಲ್ಶಿಂಗ್ ಜಿಲ್ಲೆಯ ಪೆಲ್ಲಿಂಗ್‌ನ ಸಂಗಚೋಲಿಂಗ್‌ನಲ್ಲಿ ಪ್ರಯಾಣಿಕರ ರೋಪ್‌ವೇ; ಗ್ಯಾಂಗ್‌ಟಾಕ್ ಜಿಲ್ಲೆಯ ಸಂಗಖೋಲಾದ ಅಟಲ್ ಅಮೃತ್ ಉದ್ಯಾನದಲ್ಲಿ ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಅವರ ಪ್ರತಿಮೆ ಸೇರಿದಂತೆ ಇತರ ಯೋಜನೆಗಳು ಇದರಲ್ಲಿ ಸೇರಿವೆ. ೫೦ ವರ್ಷಗಳ ರಾಜ್ಯತ್ವದ ಸ್ಮರಣಾರ್ಥ ನಾಣ್ಯ ಮತ್ತು ಅಂಚೆಚೀಟಿಯನ್ನು ಪ್ರಧಾನಿ ಬಿಡುಗಡೆ ಮಾಡಿದರು. ಪ್ರಧಾನಿ ನರೇಂದ್ರ ಮೋದಿ "ಸಿಕ್ಕಿಂ@೫೦: ಪ್ರಗತಿಯು ಉದ್ದೇಶವನ್ನು ಪೂರೈಸುವ ಮತ್ತು ಪ್ರಕೃತಿಯು ಬೆಳವಣಿಗೆಯನ್ನು ಪೋಷಿಸುವ ಸ್ಥಳ" ಕಾರ್ಯಕ್ರಮದಲ್ಲಿ ಭಾಗವಹಿಸಿದರು. ಪ್ರತಿಕೂಲ ಹವಾಮಾನದ ಕಾರಣದಿಂದ ಗ್ಯಾಂಗ್‌ಟಾಕ್‌ಗೆ ಹೋಗಲು ಸಾಧ್ಯವಾಗದ ಕಾರಣ, ಸಭೆ ಉದ್ದೇಶಿಸಿ ವರ್ಚುವಲ್ ಆಗಿ ಅವರು ಮಾತನಾಡಿದರು. ಸಿಕ್ಕಿಂನ ಪ್ರಗತಿಯನ್ನು ದೇಶ ಕಂಡಿದ್ದು, ಅದರ ಯಶಸ್ಸಿನ ಬಗ್ಗೆ ಹೆಮ್ಮೆಪಡುತ್ತದೆ. ದೇಶದಲ್ಲೇ ಸಿಕ್ಕಿಂ ಮೊದಲ ಸಂಪೂರ್ಣ ಸಾವಯವ ರಾಜ್ಯವಾಗಿದೆ. ನಾವು ಸಬ್‌ಕಾ ಸಾಥ್, ಸಬ್‌ಕಾ ವಿಕಾಸ್‌ಗೆ ಒತ್ತು ನೀಡಿದ್ದೇವೆ ಎಂದು ಅವರು ಹೇಳಿದರು. ಕೇಂದ್ರ ಸರ್ಕಾರ, ಈಶಾನ್ಯ ಭಾರತವನ್ನು, ಅಭಿವೃದ್ಧಿಯ ಕೇಂದ್ರ ಹಂತಕ್ಕೆ ತಂದಿದ್ದು, ಅದನ್ನು ಜಾಗತಿಕ ಪ್ರವಾಸೋದ್ಯಮ ತಾಣವನ್ನಾಗಿಸಲು ಶ್ರಮಿಸುತ್ತಿರುವುದಾಗಿ ಅವರು ತಿಳಿಸಿದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ (೩೪ ಸೆಕೆಂಡುಗಳು)

<><><>

ಭಾರತದಲ್ಲಿ ತಯಾರಿಸಿ - ಮೇಕ್ ಇನ್ ಇಂಡಿಯಾ ಉಪಕ್ರಮವು, ಭಾರತದ ಭದ್ರತೆ ಮತ್ತು ಸಮೃದ್ಧಿ ಎರಡಕ್ಕೂ ಬಹುಮುಖ್ಯ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಸಿಐಐ ವಾರ್ಷಿಕ ವ್ಯವಹಾರ ಶೃಂಗಸಭೆಯನ್ನು ಉದ್ದೇಶಿಸಿ ಮಾತನಾಡಿದ

ಅವರು, ಭಾರತವು ಭಯೋತ್ಪಾದನೆಯ ವಿರುದ್ಧ ತನ್ನ ಕಾರ್ಯತಂತ್ರ ಮತ್ತು ಪ್ರತಿಕ್ರಿಯೆ ಎರಡನ್ನೂ ಮರುವಿನ್ಯಾಸಗೊಳಿಸಿ, ಮರು ವ್ಯಾಖ್ಯಾನಿಸಿದೆ ಎಂದರು.

ಧ್ವನಿ : ಸಚಿವ ರಾಜನಾಥ್ ಸಿಂಗ್ (೩೧ ಸೆಕೆಂಡ್‌ಗಳು)

ಭಾರತವು ಯುದ್ಧ ವಿಮಾನ ಮತ್ತು ಕ್ಷಿಪಣಿ ವ್ಯವಸ್ಥೆಗಳನ್ನು ಮಾತ್ರ ತಯಾರಿಸುತ್ತಿಲ್ಲ, ನಾವು ಹೊಸ ಯುಗದ ಯುದ್ಧ ತಂತ್ರಜ್ಞಾನಕ್ಕೂ ಸಿದ್ಧರಾಗುತ್ತಿದ್ದೇವೆ ಎಂದು ಸಚಿವರು ಹೇಳಿದರು. ಮೇಕ್ ಇನ್ ಇಂಡಿಯಾ ದೇಶಕ್ಕೆ ನಿರ್ಣಾಯಕ ಉಪಕ್ರಮವಾಗಿದೆ.

<><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಸಂಜೆ ಜಮ್ಮುವಿಗೆ ಎರಡು ದಿನಗಳ ಭೇಟಿಗಾಗಿ ಆಗಮಿಸುತ್ತಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ, ಅಮಿತ್ ಶಾ ಖಾನೇತಾರ್‌ನಲ್ಲಿರುವ ಬಿಎಸ್‌ಎಫ್ ಯೋಧರ ಘಟಕದ ಪ್ರಧಾನ ಕಚೇರಿಯಲ್ಲಿ ಯೋಧರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ ಮತ್ತು ನಾಳೆ ಪೂಂಚ್‌ನ ಡಾಕ್ ಬಂಗಲೆಯಲ್ಲಿ ಪಾಕಿಸ್ತಾನ ಶೆಲ್ ದಾಳಿಯಿಂದ ಹಾನಿಗೊಳಗಾದ ಕುಟುಂಬಗಳನ್ನು ಭೇಟಿ ಮಾಡಲಿದ್ದಾರೆ. ಈ ವೇಳೆ ಸಚಿವರು ಪಾಕಿಸ್ತಾನದ ಗಡಿಯಾಚೆಗಿನ ಶೆಲ್ ದಾಳಿಗೆ ಗುರಿಯಾಗಿರುವ ಧಾರ್ಮಿಕ ಸ್ಥಳಗಳಿಗೆ ಭೇಟಿ ನೀಡಲಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನಾಳೆ ಅಮಿತ್ ಶಾ ಅವರು ಪೂಂಚ್‌ನ ಗಡಿ ಜಿಲ್ಲೆಗೆ ತೆರಳಲಿದ್ದು, ಪೂಂಚ್ ಡಾಕ್ ಬಂಗಲೆಯಲ್ಲಿ ನಾಗರಿಕರನ್ನು ಮತ್ತು ಖಾನೇತಾರ್‌ನಲ್ಲಿರುವ ಬಿಎಸ್‌ಎಫ್ ಸೈನಿಕರನ್ನು ಉದ್ದೇಶಿಸಿ ಅಮಿತ್ ಶಾ ಮಾತನಾಡಲಿದ್ದಾರೆ.

<><><>

ಭಾರತದ ಆಹಾರ ಉತ್ಪಾದನೆಯಲ್ಲಿ ೨೦೨೪-೨೫ರಲ್ಲಿ ದಾಖಲೆಯ ಗರಿಷ್ಠ ೩೫೪ ಮಿಲಿಯನ್ ಟನ್‌ಗಳಿಗೆ ಏರಿಕೆಯಾಗಿದೆ. ಈ ಅಂದಾಜುಗಳು ಗೋಧಿ, ಅಕ್ಕಿ, ಜೋಳ, ಸೊಯಾಬೀನ್, ದ್ವಿದಳ ಧಾನ್ಯಗಳು ಸೇರಿದಂತೆ ಎಲ್ಲಾ ಪ್ರಮುಖ ಬೆಳೆಗಳನ್ನು ಆಧರಿಸಿವೆ. ಅಕ್ಕಿ ಉತ್ಪಾದನೆಯು ೧ ಸಾವಿರದ ೪೯೦.೭೪ ಲಕ್ಷ ಮೆಟ್ರಿಕ್ ಟನ್ ತಲುಪಿದೆ.

<><><>

ಭಯೋತ್ಪಾದನೆಯನ್ನು ನಿರ್ಮೂಲನೆ ಮಾಡುವ ಭಾರತದ ದೃಢ ನಿಲುವನ್ನು ಜಾಗತಿಕ ಮಟ್ಟದಲ್ಲಿ ಅರಿವು ಮೂಡಿಸುವ ಸಲುವಾಗಿ ಭಾರತದ ಏಳು ಬಹುಪಕ್ಷೀಯ ಸಂಸದೀಯ ನಿಯೋಗಗಳು ವಿದೇಶಗಳಿಗೆ ಅಧಿಕೃತ ಭೇಟಿಯ ಸಮಯದಲ್ಲಿ ಉನ್ನತ ಮಟ್ಟದ ಚರ್ಚೆಗಳಲ್ಲಿ ತೊಡಗಿವೆ. ಡಿಎಂಕೆ

ಸಂಸದೆ ಕನಿಮೋಳಿ ನೇತೃತ್ವದ ನಿಯೋಗವು ಗ್ರೀಸ್‌ನ ವಿದೇಶಾಂಗ ಸಚಿವಾಲಯದ ಹಿರಿಯ ಅಧಿಕಾರಿಗಳನ್ನು ಭೇಟಿ ಮಾಡಿತು. ಇದರಲ್ಲಿ ಉಪ ಸಚಿವೆ ಟಾಸೋಸ್ ಚಾಟ್ಜಿವಾಸಿಲಿಯೊ, ಗ್ರೀಕ್ ಸಂಸತ್ತಿನ ಪ್ರಮುಖ ಸದಸ್ಯರು, ಪ್ರಮುಖ ನೀತಿ ತಜ್ಞರು ಮತ್ತು ಮಾಧ್ಯಮಗಳು ಸೇರಿವೆ. ರೋಮ್‌ನಲ್ಲಿ, ಬಿಜೆಪಿ ಸಂಸದ ರವಿಶಂಕರ್ ಪ್ರಸಾದ್ ನೇತೃತ್ವದ ಸರ್ವಪಕ್ಷ ನಿಯೋಗವು ಸೆನೆಟ್‌ನ ವಿದೇಶಾಂಗ ವ್ಯವಹಾರ ಮತ್ತು ರಕ್ಷಣಾ ಸಮಿತಿಯ ಅಧ್ಯಕ್ಷೆ ಸ್ಟೆಫಾನಿಯಾ ಕ್ರಾಕ್ಸಿ ಅವರೊಂದಿಗೆ ಸಭೆ ನಡೆಸಿತು. ಸಂಜಯ್ ಕುಮಾರ್ ಝಾ ನೇತೃತ್ವದ ಸರ್ವಪಕ್ಷ ಸಂಸದೀಯ ನಿಯೋಗವು ಜಕಾರ್ತದಲ್ಲಿ ಇಂಡೋನೇಷ್ಯಾ ಮೂಲದ ಚಿಂತಕರ ಚಾವಡಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ವಿದ್ವಾಂಸರು ಮತ್ತು ಸಂಶೋಧಕರೊಂದಿಗೆ ಸಂವಾದವನ್ನು ನಡೆಸಿತು. ಪನಾಮದಲ್ಲಿ ಇಂದು ಸರ್ವಪಕ್ಷ ನಿಯೋಗದ ನೇತೃತ್ವ ವಹಿಸಿರುವ ಕಾಂಗ್ರೆಸ್ ಸಂಸದ ಶಶಿ ತರೂರ್, ಭಯೋತ್ಪಾದನೆಯ ವಿರುದ್ಧ ಭಾರತದ ದೃಢ ನಿಲುವನ್ನು ಪುನರುಚ್ಚರಿಸಿದರು. ಪನಾಮದಲ್ಲಿ ಭಾರತೀಯ ರಾಯಭಾರ ಕಚೇರಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ತರೂರ್ ಪಹಲ್ಗಾಮ್‌ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿಯು ಪಾಕಿಸ್ತಾನಿ ಮಿಲಿಟರಿಯು - ಪ್ರವಾಸೋದ್ಯಮ ಮತ್ತು ಭಾರತದೊಂದಿಗೆ ಪ್ರವರ್ಧಮಾನಕ್ಕೆ ಬರುತ್ತಿದ್ದ ಕಾಶ್ಮೀರದ ಆರ್ಥಿಕತೆಯನ್ನು ದುರ್ಬಲಗೊಳಿಸಲು ಅನುಸರಿಸಲು ಬಯಸುವ ಉದ್ದೇಶಗಳ ಈಡೇರಿಕೆಯಾಗಿದೆ ಎಂದು ಹೇಳಿದರು. ಸಂಸದೆ ಸುಪ್ರಿಯಾ ಸುಳೆ ನೇತೃತ್ವದ ಸರ್ವಪಕ್ಷ ನಿಯೋಗವು ದಕ್ಷಿಣ ಆಫ್ರಿಕಾದ ಕೇಪ್ ಟೌನ್‌ನಲ್ಲಿ ಉಪ ಸಚಿವ ಕೆನ್ನೆತ್ ಮೊರೊಲಾಂಗ್ ಅವರೊಂದಿಗೆ ಮಾತುಕತೆ ನಡೆಸಿ ಭಾರತದ ಭಯೋತ್ಪಾದನಾ ನಿಗ್ರಹ ನಿಲುವನ್ನು ಸ್ಪಷ್ಟಪಡಿಸಿತು. ಶಿವಸೇನಾ ಸಂಸದ ಶ್ರೀಕಾಂತ್ ಶಿಂಧೆ ನೇತೃತ್ವದ ಬಹುಪಕ್ಷ ನಿಯೋಗವು ಕಾಂಗೋ ಪ್ರಜಾಸತ್ತಾತ್ಮಕ ಗಣರಾಜ್ಯಕ್ಕೆ ತಮ್ಮ ಭೇಟಿಯನ್ನು ಮುಗಿಸಿದ ನಂತರ ಸಿಯೆರಾ ಲಿಯೋನ್ ತಲುಪಿದೆ.

<><><><>

ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಏಪ್ರಿಲ್ ೨೨ ರಂದು ನಡೆದ ಭೀಕರ ಭಯೋತ್ಪಾದಕ ದಾಳಿಯ ಹಿಂದಿನ ಅಪರಾಧಿಗಳನ್ನು ಗುರುತಿಸಿ, ಪತ್ತೆಹಚ್ಚಿ, ಶಿಕ್ಷಿಸಿದ್ದಕ್ಕಾಗಿ ಭಾರತವನ್ನು ಶ್ಲಾಘಿಸುತ್ತಾ, ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವವನ್ನು ಭಾರತದ ರಷ್ಯಾ ರಾಯಭಾರಿ ಡೆನಿಸ್

ಅಲಿಪೋವ್ ಶ್ಲಾಘಿಸಿದ್ದಾರೆ. ಭಾರತ ಮತ್ತು ರಷ್ಯಾ ಎರಡೂ ಬಹು-ಧ್ರುವೀಯ ವಿಶ್ವ ಕ್ರಮವನ್ನು ಬೆಂಬಲಿಸುತ್ತವೆ ಎಂದು ಅವರು ಪ್ರತಿಪಾದಿಸಿದ್ದಾರೆ.

<><><><>

ವಿಶ್ವಸಂಸ್ಥೆಯ ಶಾಂತಿಪಾಲನಾ ಪಡೆಯ ಅಂತಾರಾಷ್ಟ್ರೀಯ ದಿನದಂದು ವಿಶ್ವಸಂಸ್ಥೆಯ ಶಾಂತಿಪಾಲನಾ ಪಡೆಯಲ್ಲಿ ಸೇವೆ ಸಲ್ಲಿಸುತ್ತಿರುವ ಧೈರ್ಯಶಾಲಿ ಪುರುಷರು ಮತ್ತು ಮಹಿಳೆಯರ ತ್ಯಾಗ ಮತ್ತು ಧೈರ್ಯವನ್ನು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ಗೌರವಿಸಿದ್ದಾರೆ.

<><><><>

ಇಂಡಿಯನ್ ಪ್ರೀಮಿಯರ್ ಲೀಗ್- ಐಪಿಎಲ್ ಟಿ-೨೦ ಕ್ರಿಕೆಟ್‌ನಲ್ಲಿ ಇಂದು ಪ್ಲೇ-ಆಫ್ ಪಂದ್ಯಗಳು ಆರಂಭವಾಗಲಿವೆ. ಪಾಯಿಂಟ್ಸ್ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವ ಪಂಜಾಬ್ ಕಿಂಗ್ಸ್ ತಂಡವು ಇಂದು ಸಂಜೆ ಮುಲ್ಲನ್‌ಪುರದಲ್ಲಿ ನಡೆಯುವ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಎರಡನೇ ಸ್ಥಾನದಲ್ಲಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಎದುರಿಸಲಿದೆ. ಪಂದ್ಯ ಸಂಜೆ ೭:೩೦ ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>